ಪೊಲೀಸ್ ಠಾಣೆ ಮಂಜೂರು

155 (255) ಶ್ರೀ ಅಮರೇಶ್ (ಮುಳಬಾಗಿಲು) ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಲ್ಲೂಕು ಮಟ್ಟದಲ್ಲಿ ಹೆಚ್ಚುವರಿಯಾಗಿ ಪೊಲೀಸ್ ಠಾಣೆ ಮಂಜೂರು ಮಾಡಲು ಇರುವ ಮಾನದಂಡವೇನು; (ವಿವರ ನೀಡುವುದು)

ಆ) ಮುಳಬಾಗಿಲು ತಾಲ್ಲೂಕಿನಲ್ಲಿ ಜನಸಂಖ್ಯೆ ಹೆಚ್ಚಿದ್ದು, ಈಗಿರುವ ಒಂದು ಪೊಲೀಸ್ ಠಾಣೆಯಿಂದ ಕಾನೂನು ಸುವ್ಯವಸ್ಥೆ ಕಾಪಾಡಲು ಸಾಧ್ಯವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಹೆಚ್ಚುವರಿಯಾಗಿ ಪೊಲೀಸ್ ಠಾಣೆ ಮಂಜೂರು ಮಾಡಲು ಕೈಗೊಂಡ ಕ್ರಮಗಳೇನು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ರಾಷ್ಟ್ರೀಯ ಪೊಲೀಸ್ ಆಯೋಗದ (ಶ್ರೀ ಧರ್ಮವೀರ ಸಮಿತಿ) ವರದಿಯಲ್ಲಿ, ತಾಲ್ಲೂಕು ಮಟ್ಟದಲ್ಲಿ ಹೆಚ್ಚುವರಿಯಾಗಿ ಪೊಲೀಸ್ ಠಾಣೆ ಮಂಜೂರು ಮಾಡಲು ಜನಸಾಂದ್ರತೆ, ಪ್ರದೇಶ ವ್ಯಾಪ್ತಿ (ಚದರ ಕಿ.ಮೀ.ಗಳಲ್ಲಿ), ಆ ಪ್ರದೇಶದಲ್ಲಿ ಸಂಭವಿಸುವ ಅಪರಾಧ ಪ್ರಕರಣಗಳನ್ನು ಪರಿಗಣಿಸಿ ಈ ಕೆಳಗೆ ಸೂಚಿಸಿರುವಂತೆ ಮಾನದಂಡಗಳನ್ನು ನಿಗದಿಪಡಿಸಿದೆ.

1. ವ್ಯಾಪ್ತಿ – 75 ಮೈಲಿ / 150 ಚದರ ಕಿ.ಮೀ.

2. ಅಪರಾಧ ಪ್ರಕರಣಗಳು – 300 (ವಾರ್ಷಿಕ)

3. ಜನಸಂಖ್ಯೆ – 50,000–60,000

ಈ ಮೇಲಿನ ಅಂಶಗಳೊಂದಿಗೆ, ಪರಿಸರದ ಸೂಕ್ಷ್ಮತೆ, ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು, ಸಮಾಜಬಾಹಿರ ಕೃತ್ಯಗಳು, ಅತಿಗಣ್ಯ ವ್ಯಕ್ತಿಗಳ ಚಲನವಲನ, ವಾಹನ ಸಂಚಾರ ಹಾಗೂ ಭೌಗೋಳಿಕ ಪರಿಸರವನ್ನು ಸಹ ಮಾನದಂಡವಾಗಿ ಪರಿಗಣಿಸಲಾಗುತ್ತದೆ.

ಆ) ಹೌದು.

ಇ) ಮುಳಬಾಗಿಲು ಪೊಲೀಸ್ ಠಾಣೆಯನ್ನು ಪುರ ಮತ್ತು ಗ್ರಾಮಾಂತರ ಠಾಣೆಗಳನ್ನಾಗಿ ವಿಂಗಡಿಸುವ ಬಗ್ಗೆ ಪ್ರಸ್ತಾವನೆಯು ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರು ಸಲ್ಲಿಸಿರುವ ಆದ್ಯತಾ ಪಟ್ಟಿ–'ಎ'ರಲ್ಲಿ ಸೇರಿರುತ್ತದೆ. 2010–11ನೇ ಸಾಲಿಗೆ ಈಗಾಗಲೇ ಮಂಜೂರಾತಿ ನೀಡಿದ 25 ಪೊಲೀಸ್ ಠಾಣೆಗಳು ಮತ್ತು ಒಂದು ಉಪ ವಿಭಾಗವು ಪೂರ್ಣವಾಗಿ ಕಾರ್ಯಾರಂಭಗೊಳ್ಳಲು ಕೊರತೆ ಬೀಳುವ ಅನುದಾನವನ್ನು ಸರಿದೂಗಿಸಿ

ಅವುಗಳು ಕಾರ್ಯಾರಂಭ ಮಾಡಿದ ನಂತರ ಮುಳಬಾಗಿಲು ತಾಲ್ಲೂಕಿಗೆ ಹೆಚ್ಚುವರಿಯಾಗಿ ಹೊಸ ಪೊಲೀಸ್ ಠಾಣೆಯನ್ನು ಸೃಜಿಸುವ ಬಗ್ಗೆ ಹಣಕಾಸಿನ ಲಭ್ಯತೆಯ ಆಧಾರದ ಮೇಲೆ ಮಂಜೂರು ಮಾಡಲು ಪರಿಶೀಲಿಸಲಾಗುವುದು.

ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿ

156 (404) ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು;

ಆ) ಇವುಗಳಲ್ಲಿ ಎಷ್ಟು ಸುವ್ಯವಸ್ಥೆಯಲ್ಲಿವೆ ಹಾಗೂ ಎಷ್ಟು ದುಸ್ಥಿತಿಯಲ್ಲಿವೆ;

ಇ) ಕೆಟ್ಟಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಕೆಟ್ಟಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಗ್ರಾಮವಾರು ವಿವರಗಳನ್ನು ನೀಡುವುದು)

ಈ) ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆಯೇ;

ಉ) ಹಾಗಿದ್ದಲ್ಲಿ, ಈ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಕು॥ ಶೋಭಾ ಕರಂದ್ಲಾಜೆ (ಇಂಧನ ಸಚಿವರು):

ಅ) ಮತ್ತು ಆ) ಜನವರಿ 2011ರ ಅಂತ್ಯದಲ್ಲಿದ್ದಂತೆ, ಬಿಜಾಪುರ ಜಿಲ್ಲೆಯಲ್ಲಿ ಹಾಲಿ ಇರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಒಟ್ಟು ಸಂಖ್ಯೆ 15,945. ಈ ಪೈಕಿ 15899 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ಸುವ್ಯವಸ್ಥೆಯಲ್ಲಿವೆ ಹಾಗೂ 46 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ದುರಸ್ತಿಯಲ್ಲಿವೆ.

ಇ) ವಿಫಲಗೊಳ್ಳುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸುವ ಸಲುವಾಗಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯಲ್ಲಿ ಒಟ್ಟು 22 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ, ಬಿಜಾಪುರ ಜಿಲ್ಲೆಯಲ್ಲಿ ಒಟ್ಟು 4 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳು (ಬಿಜಾಪುರ, ಇಂಡಿ, ಬಸವನ ಬಾಗೇವಾಡಿ ಮತ್ತು ಸಿಂಧಗಿಗಳಲ್ಲಿ) ಕಾರ್ಯನಿರ್ವಹಿಸುತ್ತಿವೆ. ವಿಫಲಗೊಂಡಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಈ ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳಲ್ಲಿ ದುರಸ್ಥಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ. ವಿಫಲಗೊಂಡಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಗ್ರಾಮವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.